ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ    ದಿನಾಂಕ : DATE : 24/04/2019

# ಸಿಎಂ ನಕಲಿ ಅಫಿಡವಿಟ್ ಪ್ರಕರಣ ವಿಚಾರಣೆ ಮೆ 2ಕ್ಕೆ ನಿಗದಿ

**ಬೆಂಗಳೂರು:** ಕಳೆದ 2018ರ ವಿಧಾನಸಭೆ ಚುನಾವಣೆ ವೇಳೆ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಅವರು ನಾಮಪತ್ರದ ಜತೆ ಸಲ್ಲಿಸಿದ್ದ ಪ್ರಮಾಣ ಪತ್ರದಲ್ಲಿ ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ದಾಖಲಿಸಿರುವ ಪ್ರಕರಣದ ವಿಚಾರಣೆಯನ್ನು ಮೇ.2ಕ್ಕೆ ನಿಗದಿಪಡಿಸಲಾಗಿದೆ.

ಅಕ್ರಮ ಆಸ್ತಿ ಮುಚ್ಚಿಡಲಿಕ್ಕಾಗಿಯೇ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಅವರು ಚುನಾವಣಾ ಅಧಿಕಾರಿಗಳಿಗೆ ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಕೆಲವು ವಿಚಾರಗಳನ್ನು ಮುಚ್ಚಿಟ್ಟಿದ್ದಾರೆ ಎಂದು



ಆರೋಪಿಸಿ ಪ್ರಜ್ಞಾವಂತ ನಾಗರಿಕ ಸಮಿತಿ ಅಧ್ಯಕ್ಷ ಆನಂದ್ ಎಂಬುವರು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದಾರೆ. ಈ ದೂರಿನ ವಿಚಾರಣೆ ಕೈಗೆತ್ತಿಕೊಂಡ ನ್ಯಾ. ರಾಮಚಂದ್ರ ಡಿ. ಹುದ್ದಾರ್ ಕೆಲ ಕಾಲ ವಾದ ಆಲಿಸಿ, ವಿಚಾರಣೆಯನ್ನು ಮೇ.2ಕ್ಕೆ ಮುಂದೂಡಿದ್ದಾರೆ. ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಅವರ ಎರಡನೇ ಪತ್ನಿ ರಾಧಿಕಾ ಕುಮಾರಸ್ವಾಮಿ, ಮಗಳು ಶಮಿಕಾ ಕುಮಾರಸ್ವಾಮಿ ಮತ್ತು ಪುತ್ರ ನಿಖಿಲ್ ಕುಮಾರಸ್ವಾಮಿ ಹೆಸರಲ್ಲಿ ಕೋಟ್ಯಾಂತರ ರುಪಾಯಿ ಆಸ್ತಿ ಇದೆ. ಇದನ್ನು ಮರೆಮಾಚುವ ಉದ್ದೇಶದಿಂದಲೇ ಎಚ್‌ಡಿಕೆ ಆಫಿಡವಿಟ್‌ನಲ್ಲಿ ಎರಡನೇ ಪತ್ನಿ ಹಾಗೂ ಮಕ್ಕಳ ಮಾಹಿತಿ ಉಲ್ಲೇಖಿಸಿಲ್ಲ ಎಂದು ಆರೋಪಿಸಿ ಅರ್ಜಿದಾರರು ದೂರು ದಾಖಲಿಸಿದ್ದಾರೆ. ಅಲ್ಲದೇ, ಈ ಕುರಿತು ತನಿಖೆಗೆ ಆದೇಶಿಸುವಂತೆ ಅರ್ಜಿಯಲ್ಲಿ ಮನವಿ ಮಾಡಿದ್ದಾರೆ. ಅರ್ಜಿ ವಿಚಾರಣೆಗೆ ಪುರಸ್ಕರಿಸಿರುವ ನ್ಯಾಯಾಲಯ ವಿಚಾರಣೆಯನ್ನು ಮೇ.2ಕ್ಕೆ ನಿಗದಿಪಡಿಸಿದೆ.